# ಕರ್ನಾಟಕ ವಿಧಾನ ಪರಿಷತ್

ಸದಸ್ಯರ ಹೆಸರು : ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭಾ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 92(13)
ಉತ್ತರಿಸಬೇಕಾದ ದಿನಾಂಕ : 15-7-2019
ಉತ್ತರಿಸುವ ಸಚಿವರು : ಪಶು ಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ರಾಯಚೂರು ಜಿಲ್ಲೆಯಲ್ಲಿ ಪಶು ಸಂಗೋಪನೆ ಕಾಲೇಜು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ರಾಯಚೂರು ಜಿಲ್ಲೆಯಲ್ಲಿ ಪಶು ಸಂಗೋಪನೆ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. |
| (ಆ) | ರಾಯಚೂರು ಜಿಲ್ಲೆಯಲ್ಲಿರುವ ಜಂಟಿ-ನಿರ್ದೇಶಕರ ಕಛೇರಿ ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ಸರ್ಕಾರದ ಆದೇಶ ಸಂಖ್ಯೆ: ಪಸಂಮೀ 152 ಪಅಸೇ 2018, ದಿನಾಂಕ: 23-07-2018 ರಲ್ಲಿ ರಾಯಚೂರು ಪಟ್ಟಣದಲ್ಲಿ ಜಂಟಿ ನಿರ್ದೇಶಕರ ಕಛೇರಿ ಪ್ರಾರಂಭವಾಗಿರುತ್ತದೆ. ಸಧ್ಯಕ್ಕೆ ಕಛೇರಿಯು ಉಪ ನಿರ್ದೇಶಕರ ಕಛೇರಿ ಆವರಣದಲ್ಲಿ ಕರ್ತವ್ಯ ನಿರ್ವಹಿಸುತ್ತಿದೆ.<br><br>ಜಿಲ್ಲೆಯ ಮೀನುಗಾರಿಕೆ ಹಿರಿಯ ಸಹಾಯಕ ನಿರ್ದೇಶಕರ ಕಛೇರಿ ಆವರಣದಲ್ಲಿ ಒಂದು ಎಕರೆ ಜಾಗವನ್ನು ಜಂಟಿ ನಿರ್ದೇಶಕರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ರಾಯಚೂರು ಇವರ ಕಛೇರಿಗಾಗಿ ಸರ್ಕಾರದ ಆದೇಶ ಸಂ: ಪಸಂಮೀ 127 ಮೀಇಇ 2018, ದಿನಾಂಕ: 23.05.2019 ರಂತೆ, ಸರ್ವೆ ನಂ. 1491/1 ರಲ್ಲಿ 1 ಎಕರೆ ಜಾಗವನ್ನು ಇಲಾಖೆ ಸುಪರ್ದಿಗೆ ಪಡೆಯಲಾಗಿದೆ. |
| (ಇ) | ರಾಯಚೂರು ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ರಾಯಚೂರು ಜಿಲ್ಲೆಯಲ್ಲಿ ಹಾಲಿ 1 ಪಾಲಿಕ್ಲಿನಿಕ್, 27 ಪಶು ಆಸ್ಪತ್ರೆ, 51 ಪಶು ಚಿಕಿತ್ಸಾಲಯ, 22 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳು ಮತ್ತು 5 ಸಂಚಾರಿ ಪಶು ಚಿಕಿತ್ಸಾಲಯ ಒಟ್ಟು 106 ಪಶುವೈದ್ಯ ಸಂಸ್ಥೆಗಳಿರುತ್ತವೆ.<br>22 ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಹಂತಹಂತವಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುವುದು. |
| (ಈ) | ಜಿಲ್ಲೆಯಲ್ಲಿ ಇರುವ ಒಟ್ಟು ಪಶುಗಳ ಸಂಖ್ಯೆ ಎಷ್ಟು: ಇದರ ಅನುಗುಣವಾಗಿ ಆಸ್ಪತ್ರೆಗಳನ್ನು ಪ್ರಾರಂಭಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: | ಜಿಲ್ಲೆಯಲ್ಲಿನ ಒಟ್ಟು ಜಾನುವಾರುಗಳ ಸಂಖ್ಯೆ: 14,70,919 ಇದ್ದು, ಈಗಾಗಲೇ 106 ಪಶುವೈದ್ಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಅವಶ್ಯಕತೆ ಮತ್ತು ಜಾನುವಾರು ಸಂಖ್ಯೆಗಳಿಗನುಗುಣವಾಗಿ ಮುಂದಿನ ದಿನಗಳಲ್ಲಿ ಪಶುವೈದ್ಯ ಸಂಸ್ಥೆಗಳನ್ನು ತೆರೆಯುವ ಬಗ್ಗೆ ಪರಿಶೀಲಿಸಲಾಗುವುದು. |

ಸಂ: ಪಸಂಮೀ 26 ಪಅಸೇ 2019

(ವೆಂಕಟರಾವ್ ನಾಡಗೌಡ)
ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು

**ಕರ್ನಾಟಕ ಸರ್ಕಾರ**

ಸಂಖ್ಯೆ: ಪಸಂಮೀ 26 ಪಅಸೇ 2019

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು ದಿನಾಂಕ: 12.07.2019

ಇವರಿಂದ:
ಸರ್ಕಾರದ ಕಾರ್ಯದರ್ಶಿ,
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,
ಬೆಂಗಳೂರು.

ಇವರಿಗೆ:
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು
ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭಾ ಕ್ಷೇತ್ರ), ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 92(13) ರ ಬಗ್ಗೆ.

*****

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್. ಎಸ್. ಬೋಸ್‌ರಾಜು(ವಿಧಾನಸಭಾ ಕ್ಷೇತ್ರ), ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 92(13)ಕ್ಕೆ ಸಂಬಂಧಿಸಿದಂತೆ ಕನ್ನಡ ಉತ್ತರದ 50 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

15/7/19

12/07/2019
(ಟಿ. ಹನುಮಂತೇಗೌಡ)
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ,**
**(ಪಶುಸಂಗೋಪನೆ)**

15/7/19

**ಪ್ರತಿ:**

ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.